# ಪ್ರಧಾನ ನ್ಯಾಯಿಕ ದಂಡಾಧಿಕಾರಿ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ ಮಾಗಡಿ

## ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 1000 / 2021

**ಚಾಸಾ ಃ- 01 / ಪ್ರಾಸಾ ಃ- 01**

| | |
|---|---|
| ಹೆಸರು | ಉಮಾ |
| ಗಂಡನ ಹೆಸರು | ಧರ್ಮರಾಜ್ |
| ವಯಸ್ಸು | 55 |
| ಉದ್ಯೋಗ | ಗೃಹಿಣಿ |
| ವಿಳಾಸ | ಕಲ್ಯಾ ಗೇಟ್ , ಮಾಗಡಿ |

**ದಿನಾಂಕಃ 26.03.2026 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಆರೋಪಿಯನ್ನು ನೋಡಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರನ್ನು ಜರುಗಿಸಿರುವುದಿಲ್ಲ. ಈಗ ಸಾಕ್ಷಿಗೆ ದೂರನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ದೂರನ್ನು ನಿಪಿ-01 ಎಂದು ಹಾಗು ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಈಗ ಸಾಕ್ಷಿಗೆ ಸ್ಥಳಪಂಚನಾಮೆಯನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸದರಿ ಪಂಚನಾಮೆಯನ್ನು ನಿಪಿ-2 ಎಂದು ಹಾಗೂ ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ಸದರಿ ನಿಪಿ-1 ಮತ್ತು 2 ರಲ್ಲಿ ಬರೆದಿರು ವಿಷಯಗಳು ನನಗೆ ಗೊತ್ತಿರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ದಿನಾಂಕ 07.11.2020 ರಂದು ನೀವು, ನಿಮ್ಮ ಮಗಳು, ನಿಮ್ಮ ಮೈದುನನ ಮಗನ ಮದುವೆಯ ಪ್ರಯುಕ್ತ ಬೆಳಿಗ್ಗೆ 11.30 ಗಂಟೆಗೆ ಮಾಗಡಿಯಿಂದ ಮೈಸೂರಿಗೆ ಹೋಗಿರುತ್ತಿಲರಿ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ದಿನಾಂಕ 09.11.2020 ರಂದು ನಿಮ್ಮ ಪಕ್ಕದ ಮನೆಯ ಮುರುಳಿ ಮೋಹನ್ ರವರು ಸುಮಾರು 7.00 ಗಂಟೆಗೆ ಫೋನ್ ಮಾಡಿ ನಿಮ್ಮ ಮನೆಯ ಬೀಗ ಹೊಡೆದು ಕಳ್ಳತನ ಮಾಡಿರುತ್ತಾರೆ ಎಂಬ ವಿಷಯವನ್ನು ತಿಳಿಸಿರುತ್ತಾರೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ನಂತರ ನೀವು ಮತ್ತು ನಿಮ್ಮ ಮಗಳು , ಭರತ್ ಮತ್ತು ಪುನೀತ್ ಎಲ್ಲರೂ ಮೈಸೂರಿನಿಂದ ಮಾಗಡಿಗೆ 12.30 ಗಂಟೆಗೆ ಬಂದಿರುತ್ತೀರಿ ಎಂದರೆ ಸಾಕ್ಷಿಯು ಇಲ್ಲ ಎಂದು ನುಡಿಯುತ್ತಾರೆ. ಮನೆಯನ್ನು ನೋಡಿದಾಗ ಮುರುಳಿ ಮೋಹನ್ ರವರು ತಿಳಿಸಿದಂತೆ ರಾತ್ರಿಯಲ್ಲಿ ಯಾವುದೋ ವೇಳೆಯಲ್ಲಿ ಮನೆ ಬೀಗ ಮುರಿದು ಯಾರೋ ಕಳ್ಳರು ಕಳ್ಳತನ ಮಾಡಿದ ಬಗ್ಗೆ ವಿಷಯ ಸತ್ಯಾಂಶದಿಂದ ಕೂಡಿರುತ್ತದೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಮನೆಯ ಒಳಗೆ ನೋಡಿದಾಗ 8 ಬೀರುಗಳ ಬಾಗಿಲುಗಳನ್ನು ಹೊಡೆದು ಸೀರೆಗಳನ್ನು ಚೆಲ್ಲಾಪಿಲ್ಲಿ ಹರಡಿರುತ್ತಾರೆ ಹಾಗು ಸುಮಾರು 1 ಲಕ್ಷ ಹಣ, ಒಂದು ಉಂಗುರ, ಒಂದು ಜೊತೆ ಕಿವಿ ಓಲೆ , ಒಂದು ಬ್ರೆಸ್‌ಲೈಟ್ , 1 ಚಿಕ್ಕ ಉಂಗುರ ಮತ್ತು 1 ಜೊತೆ ಕಾಲ್ ಚೈನ್ ಅನ್ನು ಯೂರೋ ಕಳ್ಳರು ಕಳ್ಳತನ ಮಾಡಿಕೊಂಡು ಹೋಗಿರುತ್ತಾರೆ ಎಂದರೆ ಸಾಕ್ಷಿ ಸದರಿ ಒಡವೆಗಳು ಸಿಕ್ಕಿರುತ್ತದೆ ಎಂದು ನುಡಿಯತ್ತಾರೆ.

ನೀವು ದೂರು ಕೊಟ್ಟ ನಂತರ ದಿನಾಂಕ 10-11-2020 ರಂದು ಪೋಲಿಸರು ನಿಮ್ಮ , ಚಾಸಾ2 ಮತ್ತು 3 ರವರ ಸಮಕ್ಷಮ ಕೃತ್ಯ ಸ್ಥಳದ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ದಿನಾಂಕ 26.12.2020 ರಂದು ಆರೋಪಿಗಳು ಸದರಿ ಒಡವೆಗಳನ್ನು ಮತ್ತು ರೂ.80 ಸಾವಿರ ಹಣವನ್ನು ಕಳ್ಳತನ ಮಾಡಿರುತ್ತಾರೆ ಎಂದು ಮರು ಹೇಳಿಕೆ ಕೊಟ್ಟಿರುತ್ತೀರಿ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಈ ಪ್ರಕರಣ ಬಗ್ಗೆ ನಿಮಗೆ ಎಲ್ಲಾ ಮಾಹಿತಿ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳ ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ.

**ಪಾಟೀ ಸವಾಲು** ಃ-

ಆರೋಪಿ ಪರ ವಕೀಲರು ಪಾಟೀಸವಾಲುಇರುವುದಿಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**ಪ್ರ. ನ್ಯಾ . ದಂ. ಮತ್ತು ಜೆ. ಎಂ. ಎಫ್. ಸಿ.**
**ಮಾಗಡಿ.**